**All India Radio: Bangalore**
**National Bulletin In Kannada**
**26.06.2025 / 7.35 am**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**26.06.2025 / 7.35 am**

**<><*<><>*><>**

ಮುಖ್ಯಾಂಶಗಳು

೧. ಆಕ್ಸಿಯಮ್-೪ ಮಿಷನ್ ; ಬಾಹ್ಯಾಕಾಶ ನಿಲ್ದಾಣದೊಂದಿಗೆ ಇಂದು ಡಾಕಿಂಗ್

೨. ಪ್ರಧಾನಿ ಅಧ್ಯಕ್ಷತೆಯಲ್ಲಿ ೪೮ನೆ ಪ್ರಗತಿ ಸಭೆ; ಪ್ರಮುಖ ಯೋಜನೆಗಳ ಪರಿಶೀಲನೆ

೩. ಎಸ್‌ಸಿಒ ರಕ್ಷಣಾ ಸಹಕಾರ ಸಭೆಯಲ್ಲಿ ಇಂದು ಕೇಂದ್ರ ಸಚಿವ ರಾಜನಾಥ್ ಸಿಂಗ್ ಭಾಗಿ

೪. ಹದಿನೇಳು ವರ್ಷದೊಳಗಿನ ಏಷಿಯನ್ ಕುಸ್ತಿ ಸ್ಪರ್ಧೆ ; ಚಾಂಪಿಯನ್ ಆಗಿ ಹೊರಹೊಮ್ಮಿದ ಭಾರತೀಯ ಮಹಿಳಾ ತಂಡ

**><><><><><><**

ಭಾರತೀಯ ಗಗನಯಾತ್ರಿ ಶುಭಾಂಶು ಶುಕ್ಲಾ ಅವರನ್ನು ಹೊತ್ತೊ ಆಕ್ಸಿಯಮ್-೪ ಮಿಷನ್ ಇಂದು ಮಧ್ಯಾಹ್ನ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದೊಂದಿಗೆ ಡಾಕಿಂಗ್ ಮಾಡಲಿದೆ. ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ ಪ್ರಕಾರ, ಇಂದು ಸಂಜೆ ೪:೩೦ ಕ್ಕೆ ಡಾಕಿಂಗ್ ನಿಗದಿಯಾಗಿದೆ. ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದೊಂದಿಗೆ ಡಾಕಿಂಗ್ ಮಾಡಿದ ನಂತರ, ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ, ನಾಸಾದ ಕಕ್ಷೆಯ ಪ್ರಯೋಗಾಲಯಕ್ಕೆ ಭೇಟಿ ನೀಡಿದ ಮೊದಲ ಭಾರತೀಯರಾಗುತ್ತಾರೆ. ನಾಲ್ಕು ಗಗನಯಾತ್ರಿಗಳನ್ನು ಹೊತ್ತ ಆಕ್ಸಿಯಮ್-೪ ನಿನ್ನೆ ಮಧ್ಯಾಹ್ನ ೧೨:೦೧ ಕ್ಕೆ ಅಮೆರಿಕದ ಫ್ಲೋರಿಡಾದಲ್ಲಿರುವ ನಾಸಾದ ಕೆನಡಿ ಬಾಹ್ಯಾಕಾಶ ಕೇಂದ್ರದಿಂದ ಯಶಸ್ವಿ ಉಡಾವಣೆಗೊಂಡಿತು. ಗ್ರೂಪ್ ಕ್ಯಾಪ್ಟನ್ ಶುಕ್ಲಾ ಬಾಹ್ಯಾಕಾಶಕ್ಕೆ ಪ್ರಯಾಣಿಸಿದ ಎರಡನೇ

ಭಾರತೀಯರಾಗಿದ್ದಾರೆ.  ಆಕ್ಸಿಯಮ್-೪ ಗಗನಯಾತ್ರಿಗಳ ತಂಡದಲ್ಲಿ ಅಮೆರಿಕದ ಪೆಗ್ಗಿ ವಿಟ್ಸನ್, ಪೋಲೆಂಡ್‌ನ ಸ್ಲಾವೋಸ್ಜ್ ಉಜ್ನಾನ್ಸ್ಕಿ ವಿಸ್ನಿವ್ಸ್ಕಿ ಮತ್ತು ಹಂಗೇರಿಯ ಟಿಬೋರ್ ಕಪು ಸೇರಿದ್ದಾರೆ.

><><><><><

ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಯೋಜನೆಯನ್ನು ಸರಾಗವಾಗಿ ಸಂಯೋಜಿಸುವ ಮೂಲಕ ಸಕ್ರಿಯ ಆಡಳಿತ ಮತ್ತು ಸಕಾಲಿಕ ಅನುಷ್ಠಾನವನ್ನು ಉತ್ತೇಜಿಸುವ ಗುರಿಯನ್ನು ಹೊಂದಿರುವ, ಬಹು-ಮಾದರಿ ವೇದಿಕೆಯಾದ ೪೮ನೇ ಪ್ರಗತಿ ಸಭೆಯ ಅಧ್ಯಕ್ಷತೆಯನ್ನು ಪ್ರಧಾನಿ ನರೇಂದ್ರ ಮೋದಿ ನಿನ್ನೆ ವಹಿಸಿದ್ದರು.  ೪೮ನೇ ಪ್ರಗತಿ ಸಭೆಯಲ್ಲಿ ಮೂಲಸೌಕರ್ಯವು ಪ್ರಮುಖ ವಿಷಯವಾಗಿತ್ತು. ಗಣಿ, ರೈಲ್ವೆ ಮತ್ತು ಜಲ ಸಂಪನ್ಮೂಲಗಳಂತಹ ಕ್ಷೇತ್ರಗಳ ಕುರಿತಂತೆ ಚರ್ಚೆ ನಡೆಸಲಾಯಿತು. ಮಹತ್ವಾಕಾಂಕ್ಷೆ ಜಿಲ್ಲೆಗಳು, ಪ್ರಧಾನ ಮಂತ್ರಿ ಆಯುಷ್ಮಾನ್ ಭಾರತ್‌ಗೆ ಸಂಬಂಧಿಸಿದ ಅಂಶಗಳು, ಬುಡಕಟ್ಟು ಮತ್ತು ಗಡಿ ಪ್ರದೇಶಗಳಲ್ಲಿ ಆರೋಗ್ಯ ಮೂಲಸೌಕರ್ಯವನ್ನು ಮತ್ತಷ್ಟು ಸುಧಾರಿಸುವ ಅಗತ್ಯತೆ ಕುರಿತು ಸಹ ಚರ್ಚಿಸಲಾಯಿತು ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

><><><><><

ಉತ್ತರ ಪ್ರದೇಶದ ಆಗ್ರಾದಲ್ಲಿ ಅಂತಾರಾಷ್ಟ್ರೀಯ ಆಲೂಗಡ್ಡೆ ಕೇಂದ್ರದ ದಕ್ಷಿಣ ಏಷ್ಯಾ ಪ್ರಾದೇಶಿಕ ಕೇಂದ್ರ ಸ್ಥಾಪಿಸಲು ಕೇಂದ್ರ ಸರ್ಕಾರ ನಿರ್ಧರಿಸಿದೆ. ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ನಿನ್ನೆ ಕೇಂದ್ರ ಸಚಿವ ಸಂಪುಟ ತೆಗೆದುಕೊಂಡ ನಿರ್ಧಾರಗಳ ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡಿದ ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್, ಈ ಕೇಂದ್ರವು ಆಲೂಗಡ್ಡೆ ಮತ್ತು ಸಿಹಿ ಗೆಣಸಿನ ಉತ್ಪಾದಕತೆಯನ್ನು ಸುಧಾರಿಸುವ ಮೂಲಕ ಆಹಾರ ಮತ್ತು ಪೌಷ್ಟಿಕಾಂಶ ಭದ್ರತೆ, ರೈತರ ಆದಾಯ ಮತ್ತು ಉದ್ಯೋಗ ಸೃಷ್ಟಿಯನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ. ಅಲ್ಲದೇ, ಸುಗ್ಗಿಯ ನಂತರದ ನಿರ್ವಹಣೆ ಮತ್ತು ಮೌಲ್ಯವರ್ಧನೆಯಲ್ಲಿ ಸಹಾಯ ಮಾಡುತ್ತದೆ ಎಂದು ಹೇಳಿದ್ದಾರೆ.

><><><><><

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಇಂದು ಚೀನಾದ ಕ್ವಿಂಗ್ಡಾವೊದಲ್ಲಿ ನಡೆಯಲಿರುವ ಶಾಂಘೈ ಸಹಕಾರ ಸಂಸ್ಥೆ-ಎಸ್‌ಸಿಒ ರಕ್ಷಣಾ ಸಚಿವರ ಸಭೆಯಲ್ಲಿ ಭಾಗವಹಿಸಲಿದ್ದಾರೆ. ಸಚಿವ ರಾಜನಾಥ್ ಸಿಂಗ್ ನಿನ್ನೆ ಸಂಜೆ ಚೀನಾ ತಲುಪಿದರು. ಸಭೆಯಲ್ಲಿ, ಪ್ರಾದೇಶಿಕ ಮತ್ತು ಅಂತಾರಾಷ್ಟ್ರೀಯ ಭದ್ರತೆ, ಭಯೋತ್ಪಾದನಾ ನಿಗ್ರಹ ಪ್ರಯತ್ನಗಳು ಮತ್ತು ರಕ್ಷಣಾ ಸಚಿವಾಲಯಗಳ ನಡುವಿನ ವರ್ಧಿತ ಸಹಕಾರ ಸೇರಿದಂತೆ ಪ್ರಮುಖ ವಿಷಯಗಳ ಬಗ್ಗೆ ಚರ್ಚಿಸುವ ನಿರೀಕ್ಷೆಯಿದೆ. ಸಭೆಯ ಹೊರತಾಗಿ, ರಕ್ಷಣಾ ಸಚಿವ ರಾಜನಾಥ್ ಸಿಂಗ್, ಚೀನಾ, ರಷ್ಯಾ ಸೇರಿದಂತೆ ಹಲವಾರು ದೇಶಗಳ ರಕ್ಷಣಾ ಸಚಿವರೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದ್ದಾರೆ. ಶಾಂಘೈ ಸಹಕಾರ ಸಂಸ್ಥೆಯು ೨೦೦೧ ರಲ್ಲಿ ಸ್ಥಾಪನೆಯಾದ ಅಂತರ್‌ಸರ್ಕಾರಿ ಸಂಸ್ಥೆಯಾಗಿದೆ. ಭಾರತವು ೨೦೧೭ ರಲ್ಲಿ ಪೂರ್ಣ ಸದಸ್ಯ ರಾಷ್ಟ್ರವಾಯಿತು. ಪ್ರಸ್ತುತ  ಎಸ್‌ಸಿಒ ಸದಸ್ಯರಲ್ಲಿ ಕಝಾಕಿಸ್ತಾನ್, ಚೀನಾ, ಕಿರ್ಗಿಸ್ತಾನ್, ಪಾಕಿಸ್ತಾನ, ರಷ್ಯಾ, ತಜಿಕಿಸ್ತಾನ್, ಉಜ್ಬೇಕಿಸ್ತಾನ್, ಇರಾನ್, ಬೆಲಾರಸ್ ಮತ್ತು ಭಾರತ ಸೇರಿವೆ. ಬಹುಪಕ್ಷೀಯತೆ, ಪ್ರಾದೇಶಿಕ ಭದ್ರತೆ, ಆರ್ಥಿಕ ಸಹಕಾರ ಮತ್ತು ಜನರಿಂದ ಜನರಿಗೆ ಸಂಬಂಧವನ್ನು ಬಲಪಡಿಸುವ ವೇದಿಕೆಯಾಗಿ ಎಸ್‌ಸಿಒ ಗೆ ಭಾರತವು ಹೆಚ್ಚಿನ ಪ್ರಾಮುಖ್ಯತೆಯನ್ನು ನೀಡುತ್ತಲೇ ಇದೆ.

><><><><><><

ಭಾರತ ಮತ್ತು ವಿಯೆಟ್ನಾಂ ನಡುವಿನ ೧೩ನೇ ರಾಜಕೀಯ ಸಮಾಲೋಚನೆ ಮತ್ತು ೧೦ನೇ ಕಾರ್ಯತಂತ್ರದ ಸಂವಾದದ ಜಂಟಿ ಅಧ್ಯಕ್ಷತೆಯನ್ನು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಕಾರ್ಯದರ್ಶಿ ಪಿ. ಕುಮಾರನ್ ಮತ್ತು ವಿಯೆಟ್ನಾಂನ ಉಪ ವಿದೇಶಾಂಗ ಸಚಿವ ನ್ಗುಯೆನ್ ಮಾನ್ ಕುವೊಂಗ್ ವಹಿಸಿದ್ದರು. ನವದೆಹಲಿಯಲ್ಲಿ ನಿನ್ನೆ ನಡೆದ ರಾಜಕೀಯ ಸಮಾಲೋಚನೆಯ ಸಭೆಯಲ್ಲಿ, ಭಾರತ-ವಿಯೆಟ್ನಾಂ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯಲ್ಲಿನ ಪ್ರಗತಿಯನ್ನು ಎರಡೂ ಕಡೆಯವರು ಪರಿಶೀಲಿಸಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ರಾಜಕೀಯ, ರಕ್ಷಣೆ ಮತ್ತು ಭದ್ರತೆ, ಕಡಲ ವ್ಯಾಪಾರ ಮತ್ತು ಹೂಡಿಕೆ, ಕೃಷಿ, ಔಷಧ, ಇಂಧನ, ವಿಜ್ಞಾನ ಮತ್ತು ತಂತ್ರಜ್ಞಾನದಂತಹ ಕ್ಷೇತ್ರಗಳಲ್ಲಿನ ಸಹಕಾರ ಸೇರಿದಂತೆ ದ್ವಿಪಕ್ಷೀಯ ಸಂಬಂಧಗಳ ಸಂಪೂರ್ಣ ವ್ಯಾಪ್ತಿಯನ್ನು ಚರ್ಚಿಸಲಾಯಿತು. ಪರಂಪರೆ ಸಂರಕ್ಷಣೆ ಮತ್ತು ಪುನಃಸ್ಥಾಪನೆ ಯೋಜನೆಗಳು, ತ್ವರಿತ

ಪರಿಣಾಮ ಯೋಜನೆಗಳು, ವಿದ್ಯಾರ್ಥಿವೇತನಗಳ ಮೂಲಕ ಭಾರತ ಮತ್ತು ವಿಯೆಟ್ನಾಂ ನಡುವೆ ನಡೆಯುತ್ತಿರುವ ಅಭಿವೃದ್ಧಿ ಸಹಕಾರದ ಬಗ್ಗೆ ಎರಡೂ ಕಡೆಯವರು ಪರಿಶೀಲನೆ ನಡೆಸಿದರು ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

><><><><><

ಈ ವರ್ಷದ ಏಪ್ರಿಲ್‌ನಲ್ಲಿ ಭಾರತಕ್ಕೆ ಒಟ್ಟು ವಿದೇಶಿ ನೇರ ಹೂಡಿಕೆ-ಎಫ್‌ಡಿಐ ಒಳಹರಿವು ೮.೮ ಶತಕೋಟಿ ಡಾಲರ್‌ಗಳಿಗೆ ಏರಿಕೆಯಾಗಿದೆ. ಇದು ಮಾರ್ಚ್‌ನಲ್ಲಿ ೫.೯ ಶತಕೋಟಿ ಡಾಲರ್‌ಗಳಿಗಿಂತ ಮತ್ತು ಏಪ್ರಿಲ್ ೨೦೨೪ ರಲ್ಲಿ ೭.೨ ಶತಕೋಟಿ ಡಾಲರ್‌ಗಳಿಗಿಂತ ಹೆಚ್ಚಾಗಿದೆ. ಆರ್‌ಬಿಐ ನ ಮಾಸಿಕ ವರದಿ ಪ್ರಕಾರ, ಈ ವರ್ಷದ ಏಪ್ರಿಲ್‌ನಲ್ಲಿ ಒಟ್ಟು ಎಫ್‌ಡಿಐ ಒಳಹರಿವಿನ ಅರ್ಧದಷ್ಟು ಭಾಗವನ್ನು ಉತ್ಪಾದನೆ ಮತ್ತು ವ್ಯವಹಾರ ಸೇವೆಗಳು ಹೊಂದಿವೆ. ಕಳೆದ ಐದು ವರ್ಷಗಳಲ್ಲಿ ಡಿಜಿಟಲ್ ಆರ್ಥಿಕ ವಲಯಗಳಲ್ಲಿ ಗ್ರೀನ್‌ಫೀಲ್ಡ್ ಹೂಡಿಕೆಯಲ್ಲಿ ಭಾರತವು ಜಾಗತಿಕವಾಗಿ ೧೬ನೇ ಸ್ಥಾನದಲ್ಲಿದೆ ಮತ್ತು ಜಾಗತಿಕ ದಕ್ಷಿಣದ ಎಲ್ಲಾ ದೇಶಗಳಲ್ಲಿ ಅತ್ಯಧಿಕವಾಗಿದೆ.

><><><><><

ಜುಲೈ ೩ ರಂದು ಆರಂಭವಾಗಲಿರುವ ಅಮರನಾಥ ಯಾತ್ರೆಗೆ ಪೂರ್ವಸಿದ್ಧತಾ ಕಾರ್ಯವಾಗಿ ಭದ್ರತಾ ಪಡೆಗಳು ನಿನ್ನೆ ಜಮ್ಮು-ಕಾಶ್ಮೀರದ ಬಾಲ್ಟಾಲ್ ಬೇಸ್ ಕ್ಯಾಂಪ್‌ನಲ್ಲಿ ಸಮಗ್ರ ಜಂಟಿ ಅಣಕು ಕವಾಯತು ನಡೆಸಿದವು. ಹಿರಿಯ ಪೊಲೀಸ್ ವರಿಷ್ಠಾಧಿಕಾರಿ ಗಂಡರ್‌ಬಾಲ್ ಅವರ ಮೇಲ್ವಿಚಾರಣೆಯಲ್ಲಿ ಈ ಕವಾಯತು ನಡೆಯಿತು. ಈ ಕವಾಯತಿನಲ್ಲಿ ಜಮ್ಮು-ಕಾಶ್ಮೀರ ಪೊಲೀಸ್, ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ-ಎನ್‌ಡಿಆರ್‌ಎಫ್, ರಾಜ್ಯ ವಿಪತ್ತು ನಿರ್ವಹಣಾ ಪಡೆ-ಎಸ್‌ಡಿಆರ್‌ಎಫ್, ಸಿಆರ್‌ಪಿಎಫ್‌ನ ೪೯ನೇ ಬೆಟಾಲಿಯನ್, ಭಾರತೀಯ ಸೇನೆ, ಆರೋಗ್ಯ ಇಲಾಖೆ ಹಾಗೂ ಅಗ್ನಿಶಾಮಕ ಮತ್ತು ತುರ್ತು ಸೇವೆಗಳು ಭಾಗವಹಿಸಿದ್ದವು. ಈ ವರ್ಷ ಜುಲೈ ೩ ರಂದು ಅಮರನಾಥ ಯಾತ್ರೆ ಆರಂಭವಾಗಲಿದೆ. ರಕ್ಷಾ ಬಂಧನ ದಿನವಾದ ಆಗಸ್ಟ್ ೯ ರಂದು ಯಾತ್ರೆ ಸಂಪನ್ನಗೊಳ್ಳಲಿದೆ.

><><><><><

ವಿಯೆಟ್ನಾಂನ ವುಂಗ್‌ಟೌನಲ್ಲಿ ನಡೆದ ೧೭ ವರ್ಷದೊಳಗಿನ ಏಷ್ಯನ್ ಕುಸ್ತಿ ಚಾಂಪಿಯನ್‌ಶಿಪ್‌ನಲ್ಲಿ ಭಾರತೀಯ ಮಹಿಳಾ ಕುಸ್ತಿ ತಂಡ ಚಾಂಪಿಯನ್ ಆಗಿ ಹೊರಹೊಮ್ಮಿದೆ. ೧೭ ವರ್ಷದೊಳಗಿನ ಭಾರತೀಯ ಮಹಿಳಾ ತಂಡವು ೫ ಚಿನ್ನ, ೩ ಬೆಳ್ಳಿ ಮತ್ತು ೨ ಕಂಚಿನೊಂದಿಗೆ ಒಟ್ಟು ೧೦ ಪದಕಗಳನ್ನು ಗೆದ್ದಿದೆ. ಚೀನಾ ಎರಡನೇ ಸ್ಥಾನ ಪಡೆದರೆ, ಜಪಾನ್ ಮೂರನೇ ಸ್ಥಾನಕ್ಕೆ ತೃಪ್ತಿ ಪಟ್ಟಿಕೊಂಡಿತು.

><><><><><

ಬರ್ಲಿನ್‌ನಲ್ಲಿ ನಡೆಯುತ್ತಿರುವ ನಾಲ್ಕು ರಾಷ್ಟ್ರಗಳ ಹಾಕಿ ಪಂದ್ಯಾವಳಿಯಲ್ಲಿ ಮೂರನೇ ಸ್ಥಾನಕ್ಕಾಗಿ ನಿನ್ನೆ ನಡೆದ ಸೆಣಸಾಟದಲ್ಲಿ ಭಾರತೀಯ ಜೂನಿಯರ್ ಪುರುಷರ ಹಾಕಿ ತಂಡ ಆಸ್ಟ್ರೇಲಿಯಾವನ್ನು ೨-೧ ಗೋಲುಗಳಿಂದ ಸೋಲಿಸಿತು. ಭಾರತದ ಪರವಾಗಿ ಅಜೀತ್ ಯಾದವ್ ಮತ್ತು ರೋಹಿತ್ ತಲಾ ಒಂದು  ಗೋಲು ಗಳಿಸಿದರೆ, ಆಸ್ಟ್ರೇಲಿಯಾ ಪರವಾಗಿ ನಾಯಕ ಟೋಬಿ ಮಲ್ಲನ್ ಒಂದು ಗೋಲು ಗಳಿಸಿದರು.

><><><><><

ಖೇಲೋ ಇಂಡಿಯಾ ವಿಶ್ವವಿದ್ಯಾಲಯ ಕ್ರೀಡಾಕೂಟ-೨೦೨೫ ಈ ವರ್ಷದ ನವೆಂಬರ್‌ನಲ್ಲಿ ರಾಜಸ್ಥಾನದ ಜೈಪುರದಲ್ಲಿ ನಡೆಯಲಿದೆ. ಈ ವರ್ಷ ೨೦೦ ಕ್ಕೂ ಹೆಚ್ಚು ವಿಶ್ವವಿದ್ಯಾಲಯಗಳಿಂದ ೪ ಸಾವಿರಕ್ಕೂ ಹೆಚ್ಚು ಕ್ರೀಡಾಪಟುಗಳು ೨೦ ವಿಭಾಗಗಳಲ್ಲಿ ಸ್ಪರ್ಧಿಸುವ ನಿರೀಕ್ಷೆಯಿದೆ. ವಿಶ್ವವಿದ್ಯಾಲಯ ಕ್ರೀಡಾಕೂಟವು ೨೫ ವರ್ಷದೊಳಗಿನ ಕ್ರೀಡಾಪಟುಗಳಿಗಾಗಿ ಆಯೋಜಿಸಲಾಗಿದೆ ಎಂದು ಕೇಂದ್ರ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವಿಯಾ ಹೇಳಿದ್ದಾರೆ.

><><><><><

ದೇಶದ ವಾಯುವ್ಯ, ಮಧ್ಯ, ಪೂರ್ವ ಮತ್ತು ಈಶಾನ್ಯ ಭಾಗಗಳಲ್ಲಿ ಮುಂದಿನ ೭ ದಿನಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕರ್ನಾಟಕದ ಪ್ರತ್ಯೇಕ ಸ್ಥಳಗಳಲ್ಲಿ, ತಮಿಳುನಾಡು, ಪುದುಚೇರಿ, ಕಾರೈಕಲ್, ಕೇರಳ, ಮಾಹೆ ,

ಪೂರ್ವ ರಾಜಸ್ಥಾನ, ಗುಜರಾತ್, ಪಂಜಾಬ್, ಉತ್ತರಾಖಂಡ, ಮಹಾರಾಷ್ಟ್ರ, ಮಧ್ಯಪ್ರದೇಶ, ಜಾರ್ಖಂಡ್, ಒಡಿಶಾದ ಹಲವು ಸ್ಥಳಗಳಲ್ಲಿ ಇಂದು ಭಾರೀ ಮಳೆಯಾಗುವ ಸಾಧ್ಯತೆಯಿದೆ. ಮುಂದಿನ ೨೪ ಗಂಟೆಗಳಲ್ಲಿ ರಾಜಸ್ಥಾನ, ಪಂಜಾಬ್, ಹರಿಯಾಣ, ದೆಹಲಿ ಮತ್ತು ಪಶ್ಚಿಮ ಉತ್ತರ ಪ್ರದೇಶದ ಕೆಲವು ಭಾಗಗಳಲ್ಲಿ ನೈಋತ್ಯ ಮುಂಗಾರು ಮತ್ತಷ್ಟು ವೇಗವಾಗಲಿದೆ. ಕಾಶ್ಮೀರ, ಲಡಾಖ್ ಮತ್ತು ಉತ್ತರಾಖಂಡದ ಪ್ರತ್ಯೇಕ ಸ್ಥಳಗಳಲ್ಲಿ ಗುಡುಗು ಮತ್ತು ಬಿರುಗಾಳಿ ಸಹಿತ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

><><><><><

ಉತ್ತರ ಪ್ರದೇಶವು ತನ್ನ ಅತ್ಯಂತ ಮಹತ್ವಾಕಾಂಕ್ಷೆಯ ಚಲನಚಿತ್ರ ಮತ್ತು ಮಾಧ್ಯಮ ಉದ್ಯಮಕ್ಕೆ - ಗ್ರೇಟರ್ ನೋಯ್ಡಾದ ಯಮುನಾ ಎಕ್ಸ್‌ಪ್ರೆಸ್‌ವೇಯ ಸೆಕ್ಟರ್ -೨೧ ರಲ್ಲಿ ಅಂತಾರಾಷ್ಟ್ರೀಯ ಚಲನಚಿತ್ರ ನಗರಕ್ಕೆ ಇಂದು ಶಿಲಾನ್ಯಾಸ ನೆರವೇರಿಸಲಿದೆ. ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಈ ಯೋಜನೆಗೆ ಶಿಲಾನ್ಯಾಸ ನೆರವೇರಿಸಲಿದ್ದಾರೆ.

><><><><><

ಒಡಿಶಾದ ಪುರಿಯಲ್ಲಿ ನಾಳೆಯಿಂದ ಪ್ರಾರಂಭವಾಗಲಿರುವ ವಿಶ್ವಪ್ರಸಿದ್ಧ ಭಗವಾನ್ ಜಗನ್ನಾಥ ರಥಯಾತ್ರೆಗೆ ಎಲ್ಲಾ ಭದ್ರತಾ ವ್ಯವಸ್ಥೆಗಳನ್ನು ಅಂತಿಮಗೊಳಿಸಲಾಗಿದೆ. ಸಂಚಾರ ನಿರ್ವಹಣೆ, ಜಗನ್ನಾಥ ದೇವಾಲಯದ ಒಳಗೆ ಮತ್ತು ಹೊರಗೆ ಭದ್ರತೆ ಮತ್ತು ರಥಗಳ ಸುತ್ತ ಮುತ್ತಲ ಜನಸಂದಣಿ ನಿಯಂತ್ರಣ ಮತ್ತು ಕರಾವಳಿ ಪ್ರದೇಶಗಳಲ್ಲಿ ಭದ್ರತೆಗಾಗಿ ಒಡಿಶಾ ಪೊಲೀಸರು ವಿಶೇಷ ವ್ಯವಸ್ಥೆಗಳನ್ನು ಮಾಡಿದ್ದಾರೆ. ಮೊದಲ ಬಾರಿಗೆ, ಪುರಿ ಮತ್ತು ಸುತ್ತಮುತ್ತ ಸಮಗ್ರ ಕಮಾಂಡ್-ಅಂಡ್-ಕಂಟ್ರೋಲ್ ವ್ಯವಸ್ಥೆ ಸ್ಥಾಪಿಸಲಾಗಿದ್ದು, ಇದರಲ್ಲಿ ಸುಮಾರು ೨೭೫ ಕೃತಕಬುದ್ಧಿಮತ್ತೆ ಸಕ್ರಿಯಗೊಳಿಸಿದ ಸಿಸಿಟಿವಿಗಳಿಂದ ಕಣ್ಗಾವಲು ಇರಿಸಲಾಗಿದೆ. ರಥಯಾತ್ರೆಗಾಗಿ ಪವಿತ್ರ ಕರಾವಳಿ ನಗರದಾದ್ಯಂತ ೨೦೦ ಪೊಲೀಸ್ ಪಡೆ, ಬಿಎಸ್‌ಎಫ್ ಮತ್ತು ಸಿಆರ್‌ಪಿಎಫ್‌ನ ಎಂಟು ಕಂಪನಿಗಳನ್ನು ನಿಯೋಜಿಸಲಾಗಿದೆ. ರಥಯಾತ್ರೆಯ ಸಮಯದಲ್ಲಿ ಕೋಸ್ಟ್ ಗಾರ್ಡ್ ಏರ್ ಎನ್‌ಕ್ಲೇವ್ ಸಮುದ್ರದಲ್ಲಿ ವೈಮಾನಿಕ ಕಣ್ಗಾವಲು ನಡೆಸುತ್ತದೆ. ಈ ವರ್ಷದ ರಥಯಾತ್ರೆ

ಉತ್ಸವಕ್ಕಾಗಿ ಒಡಿಶಾ ಪೊಲೀಸರು ಶ್ವಾನ ದಳ ನಿಯೋಜಿಸಿದ್ದು, ಸಾಕಷ್ಟು ಸಂಖ್ಯೆಯ ಡ್ರೋನ್ ವಿರೋಧಿ, ವಿಧ್ವಂಸಕ ವಿರೋಧಿ ವ್ಯವಸ್ಥೆ ಅಳವಡಿಸಿದ್ದಾರೆ.

><><><><><><